ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

5

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ - ಉಪಸಭಾಪತಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 6/1/2021

# ಪರಿಷತ್ ಗದ್ದಲ: ಅಧಿಕಾರಿಗಳ ಕರ್ತವ್ಯ ಲೋಪವಷ್ಟೇ ತನಿಖೆ

ಕಲಬುರಗಿ: ವಿಧಾನ ಪರಿಷತ್‌ನಲ್ಲಿ ನಡೆದ ಗಲಾಟೆ ಕುರಿತು ಸಭಾಪತಿ ಆದೇಶಿಸಿರುವ ತನಿಖೆ ಅಧಿಕಾರಿಗಳ ಕರ್ತವ್ಯ ಲೋಪಕ್ಕೆ ಮಾತ್ರ ಸೀಮಿತವಾಗಿದೆ. ಪರಿಷತ್ ಸದಸ್ಯರ ನಡವಳಿಕೆಗಳ ಬಗ್ಗೆ ತನಿಖೆಗೆ ಆದೇಶ ನೀಡಿಲ್ಲ ಎಂದು ಕಾನೂನು ಸಚಿವ ಜೆ.ಸಿ. ಮಾಧುಸ್ವಾಮಿ ತಿಳಿಸಿದರು.



ಸುದ್ದಿಗಾರರೊಂದಿಗೆ ಮಾತನಾಡಿ, ಪರಿಷತ್‌ನಲ್ಲಿ ಇಂತಹ ಗದ್ದಲ, ಗಲಾಟೆ ನಡೆಯುತ್ತದೆ ಎಂದು ಯಾರೂ ನಿರೀಕ್ಷಿಸಿರಲಿಲ್ಲ. ಸಭಾಪತಿ ವಿರುದ್ಧ ಅವಿಶ್ವಾಸ ಗೊತ್ತುವಳಿ ಮಂಡಿಸಿ 14 ದಿನ ಕಳೆದಿತ್ತು. ಹೀಗಾಗಿ ಅವರಾಗಿಯೇ ಕುರ್ಚಿ ಬಿಟ್ಟು ಕೊಡುತ್ತಾರೆ ಎನ್ನುವ ವಿಶ್ವಾಸವಿತ್ತು. ಬೆಲ್ ಬಾರಿಸಿದ ನಂತರವೂ ಸಭಾಪತಿ ಬಾರದಿರುವ ಕಾರಣ ಉಪ ಸಭಾಪತಿ ಅವರನ್ನು ಕೂರಿಸಲಾಯಿತು. ಉಪಸಭಾಪತಿ ಅವರನ್ನು ಕುರ್ಚಿ ಮೇಲೆ ಕೂರಿಸಿದ ಮೇಲೆ ಅನಿರೀಕ್ಷಿತ ರೀತಿಯಲ್ಲಿ ಗಲಾಟೆ ನಡೆಯಿತು. ಈ ಕುರಿತು ನಡೆಯುತ್ತಿರುವ ತನಿಖೆ ಕೇವಲ ಅಧಿಕಾರಿಗಳ ಕರ್ತವ್ಯ ಲೋಪಕ್ಕೆ ಮಾತ್ರ ಸೀಮಿತವಾಗಿದೆ ಎಂದರು. ಪಕ್ಷ ವಿಲೀನ ಹೆಸರಲ್ಲಿ ಜೆಡಿಎಸ್ ಇಬ್ಭಾಗ ಮಾಡಲು ಬಿಜೆಪಿ ಕುತಂತ್ರ ನಡೆಸಿದೆ ಎಂಬ ಮಾಜಿ ಸಿಎಂ ಕುಮಾರಸ್ವಾಮಿ ಹೇಳಿಕೆ ನಿರಾಧಾರ. ಅವರೇ ವಿಧಾನ ಪರಿಷತ್‌ನಲ್ಲಿ ನಮಗೆ ಬೆಂಬಲಿಸಿದ್ದಾರೆ.

ಕಳೆದ ಒಂದು ವರ್ಷದಿಂದ ರಾಜ್ಯ ಕೊರೊನಾ, ಅತಿವೃಷ್ಟಿ ಸೇರಿ ವಿವಿಧ ಸಂಕಷ್ಟ ಎದುರಿಸುತ್ತಿದೆ. ಇದರಿಂದ ಯಾವುದೇ ಶಾಸಕರಿಗೂ ಮೊದಲಿನಂತೆ ಅನುದಾನ ನೀಡಲು ಸಾಧ್ಯವಾಗಿಲ್ಲ. ಎಲ್ಲ ಕೆಲಸಗಳು ಸರಿಯಾಗಿ ಆಗಿದೆ ಎಂದು ಆತ್ಮವಿಶ್ವಾಸದಿಂದ ಯಾರೂ ಹೇಳುವ ಸ್ಥಿತಿಯಲ್ಲಿಲ್ಲ. ನ್ಯಾಯಾಂಗ ಕಾರ್ಯಕ್ರಮಗಳಿಗೆ ಜನಪ್ರತಿನಿಧಿಗಳನ್ನು ಆಹ್ವಾನಿಸದಿರುವ ಕೆಟ್ಟ ಸಂಪ್ರದಾಯ ಈ ಹಿಂದಿನಿಂದಲೂ ಬಂದಿದೆ. ಕೆಲ ಶಾಸಕರ ಮೇಲೆ ಪ್ರಕರಣಗಳು ಇರುವುದರಿಂದ ವೇದಿಕೆ ಹಂಚಿಕೊಳ್ಳಲು ನ್ಯಾಯಾಧೀಶರು ಹಿಂದೇಟು ಹಾಕುತ್ತಾರೆ. ಆದರೂ, ಶಾಸಕರ ಬಗ್ಗೆ ಪೂರ್ವ ಮಾಹಿತಿ ಆಧಾರಿತವಾಗಿ ಆಹ್ವಾನಿಸಲು ಅವಕಾಶ ಇರುತ್ತದೆ. ಈ ಬಗ್ಗೆ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಗಳ ಜತೆಗೆ ಚರ್ಚಿಸಲಾಗವುದು ಎಂದರು.